# ಬೆಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರ, ದೇವನಹಳ್ಳಿ

ನಂ. 333/1, ಮೊದಲನೇ ಮಹಡಿ, ವಿ.ಜಿ. ಕಾಂಪ್ಲೆಕ್ಸ್, ಶಾಂತಿನಗರ, ಸೂಲಿಬೆಲೆ ರಸ್ತೆ, ದೇವನಹಳ್ಳಿ ಟೌನ್, ಬೆಂಗಳೂರು ಗ್ರಾಮಾಂತರ ಜಿಲ್ಲೆ-562110

ದೂ. : 080-29566001, 080-27682035 ಇಮೇಲ್ : biaapa.devanahalli@gmail.com ವೆಬ್‌ಸೈಟ್ : www.biaapa.tpa.gov.in

## "ತಾತ್ಕಾಲಿಕ ವಸತಿ ವಿನ್ಯಾಸ ನಕ್ಷೆ ಅನುಮೋದನೆ ಪತ್ರ"

ವಿಷಯ: ದೇವನಹಳ್ಳಿ ತಾಲ್ಲೂಕು, ಕುಂದಾಣ ಹೋಬಳಿ, ಹೆಗ್ಗನಹಳ್ಳಿ ಗ್ರಾಮದ ಸ.ನಂ 60/1 ರಲ್ಲಿ 5ಎ-00ಗು, 61/1 ರಲ್ಲಿ 8ಎ-20ಗು, 66 ರಲ್ಲಿ 4ಎ-25ಗು, 67 ರ ಪೈಕಿ 3ಎ-38ಗು, 68/1 ರಲ್ಲಿ 2ಎ-24.08ಗು, 78 ರ ಪೈಕಿ 4ಎ-19ಗು ಒಟ್ಟು 29ಎ-06.08ಗು ಪೈಕಿ ಸ್ಥಳದಲ್ಲಿ ಭೌತಿಕವಾಗಿ ಲಭ್ಯವಿರುವ 27ಎ-11.08ಗು ಅಥವಾ 110427.055 ಚ.ಮೀ ವಿಸ್ತೀರ್ಣ ಪ್ರದೇಶದಲ್ಲಿ ವಸತಿ ವಿನ್ಯಾಸ ನಕ್ಷೆಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961ರ ಕಲಂ 17 (2ಎ) ರ ಅಡಿಯಲ್ಲಿ ತಾತ್ಕಾಲಿಕ ಅನುಮೋದನೆ ನೀಡಲು ಕೋರಿರುವ ಬಗ್ಗೆ.

ಉಲ್ಲೇಖ:

1) ಮೆ॥ ಪಿನಾಕಲ್ ಇನ್ವೆಸ್ಟ್‌ಮೆಂಟ್ಸ್ ರ ಪರವಾಗಿ ಪಾಲುದಾರರಾದ ಮೆ॥ ಐಎನ್‌ಆರ್ ಎನರ್ಜಿ ಪ್ರೈವೇಟ್ ಲಿಮಿಟೆಡ್ ರ ಪರವಾಗಿ ನಿರ್ದೇಶಕರಾದ ಶ್ರೀ ಇರ್ಫಾನ್ ರಜಾಕ್ ಹಾಗೂ ಅಧಿಕೃತ ಸಹಿದಾರರಾದ ಶ್ರೀ ಪ್ರವೀಣ್ ಕುಮಾರ್.ಎಂ.ಎಸ್ (ಭೂಮಾಲೀಕರು ಹಾಗೂ ಸ.ನಂ 61/2 ರ ಜಮೀನಿನ ಮಾಲೀಕರಾದ ಶ್ರೀ ವಿ.ರಾಮ್ ಪ್ರಸಾದ್ @ ವಿ.ರಾಮಪ್ರಸಾದ್‌ರಾಜು ಬಿನ್ ಲೇ॥ ವಿ.ವರದರಾಜು ರವರ ಪರವಾಗಿ ನೋಂದಾಯಿತ ಜಿಪಿಎದಾರರು) ರವರುಗಳ ಅರ್ಜಿ ಸಂಖ್ಯೆ: 4991, ದಿನಾಂಕ: 18/02/2025.
2) ಸರ್ಕಾರದ ಆದೇಶ ಸಂ. ನಅಇ 261 ಬಿಎಂಆರ್ 2022, ಬೆಂಗಳೂರು ದಿನಾಂಕ: 30/01/2023.
3) ಈ ಪ್ರಾಧಿಕಾರದ ಭೂಉಪಯೋಗ ಬದಲಾವಣೆ ಆದೇಶದ ಸಂಖ್ಯೆ: ಬಿಐಎಎಪಿಎ/ಟಿಪಿ/ ಭೂಉಬ/22/2022-23/439, ದಿನಾಂಕ: 29/05/2023.
4) ಜಿಲ್ಲಾಧಿಕಾರಿಗಳು, ಬೆಂಗಳೂರು ಗ್ರಾಮಾಂತರ ಜಿಲ್ಲೆ ರವರ ಅಧಿಕೃತ ಜ್ಞಾಪನ ಅರ್ಜಿ ಸಂಖ್ಯೆ: 572185, ದಿ : 22/02/2024 (ಸ.ನಂ. 60/1), ನಂ. 572189, ದಿ : 22/02/2024 (ಸ.ನಂ. 61/1), ನಂ. 572194, ದಿ : 22/02/2024 (ಸ.ನಂ. 61/2), ನಂ. 725874, ದಿ : 20/01/2025 (ಸ.ನಂ. 66), ನಂ. 572195, ದಿ : 22/02/2024 (ಸ.ನಂ. 67), ನಂ. 725878, ದಿ : 23/01/2025 (ಸ.ನಂ. 68/1), ನಂ. 572198, ದಿ : 22/02/2024 (ಸ.ನಂ. 78).
5) ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ದಂಡಾಧಿಕಾರಿಗಳು, ಬೆಂಗಳೂರು ಗ್ರಾಮಾಂತರ ಜಿಲ್ಲೆ ರವರ ಅಧಿಕೃತ ಜ್ಞಾಪನ ಪತ್ರ ಸಂಖ್ಯೆ : ಬಿಆರ್‌ಡಿಸಿ-ಎಲ್‌ಎನ್‌ಡಿಜಿ0ಎಲ್‌ಎನ್‌ಡಿಡಿ/21/2025-ಎಲ್‌ಎನ್‌ಡಿಆರ್‌ಇಜಿಡಿವಿಹೆಚ್-ಬೆಂಗಳೂರು ಗ್ರಾಮಾಂತರ ಡಿಸಿ, ದಿನಾಂಕ: 16/01/2025.
6) ವಸತಿ ವಿನ್ಯಾಸ ನಕ್ಷೆಗೆ ತಾತ್ಕಾಲಿಕ ಅನುಮೋದನೆ ನೀಡುವ ಸಂಬಂಧ ಪೂರ್ವ ಸಮ್ಮತಿಗಾಗಿ ಮಹಾನಗರ ಯೋಜಕರು, ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರ ರವರಿಗೆ ಕಡತ ಸಲ್ಲಿಸಿದ ದಿನಾಂಕ: 16/04/2025.
7) ಮಹಾನಗರ ಯೋಜಕರು, ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರ ರವರು ಸಮ್ಮತಿ ನೀಡಿದ ದಿನಾಂಕ: 21/04/2025.
8) ದಿನಾಂಕ: 23/04/2025 ರಂದು ನಡೆದ ಪ್ರಾಧಿಕಾರದ 146 ನೇ ಸಭೆಯ ವಿಷಯ ಸಂಖ್ಯೆ: 146.66 ರ ನಡಾವಳಿ.
9) ಈ ಪ್ರಾಧಿಕಾರದ ಸಮಸಂಖ್ಯೆಯ ಹಿಂಬರಹ ಪತ್ರ ದಿನಾಂಕ: 27/06/2025.
10) ಮೆ॥ ಪಿನಾಕಲ್ ಇನ್ವೆಸ್ಟ್‌ಮೆಂಟ್ಸ್ ರ ಪರವಾಗಿ ಪಾಲುದಾರರಾದ ಮೆ॥ ಐಎನ್‌ಆರ್ ಎನರ್ಜಿ ಪ್ರೈವೇಟ್ ಲಿಮಿಟೆಡ್ ರ ಪರವಾಗಿ ನಿರ್ದೇಶಕರಾದ ಶ್ರೀ ಇರ್ಫಾನ್ ರಜಾಕ್ ಹಾಗೂ ಅಧಿಕೃತ ಸಹಿದಾರರಾದ ಶ್ರೀ ಪ್ರವೀಣ್ ಕುಮಾರ್.ಎಂ.ಎಸ್ ರವರುಗಳ ಮನವಿ ಪತ್ರ ದಿನಾಂಕ: 03/07/2025
11) ಈ ಪ್ರಾಧಿಕಾರದ ಸಮ ಸಂಖ್ಯೆಯ ಶುಲ್ಕ ಪಾವತಿ ಸೂಚನಾ ಪತ್ರ ದಿನಾಂಕ: 07/07/2025.
12) ಅರ್ಜಿದಾರರು ಶುಲ್ಕಗಳನ್ನು ಪಾವತಿಸಿದ ರಶೀದಿ ಸಂಖ್ಯೆ: 0014787, ದಿನಾಂಕ:

11/07/2025 ರಂತೆ ಒಟ್ಟು ರೂ. 66,08,850/- (ಅರವತ್ತಾರು ಲಕ್ಷದ ಎಂಟು ಸಾವಿರದ ಎಂಟು ನೂರ ಐವತ್ತು ರೂಪಾಯಿಗಳು ಮಾತ್ರ)ರಂತೆ ಶುಲ್ಕಗಳನ್ನು ಪಾವತಿಸಿರುತ್ತಾರೆ.

13) ಸರ್ಕಾರದ ಅಧಿಸೂಚನೆ ಸಂಖ್ಯೆ: ಸಂವ್ಯಶಾಇ 24 ಶಾಸನ 2015, ಬೆಂಗಳೂರು ದಿನಾಂಕ: 10/09/2015 ಮತ್ತು ಡಿಪಿಎಎಲ್36ಶಾಸನ 2021, ಬೆಂಗಳೂರು ದಿನಾಂಕ:07/10/2021.

* * * * * * * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಮೆ॥ ಪಿನಾಕಲ್ ಇನ್ವೆಸ್ಟ್‌ಮೆಂಟ್ಸ್ ರ ಪರವಾಗಿ ಪಾಲುದಾರರಾದ ಮೆ॥ ಐಎನ್‌ಆರ್ ಎನರ್ಜಿ ಪ್ರೈವೇಟ್ ಲಿಮಿಟೆಡ್ ರ ಪರವಾಗಿ ನಿರ್ದೇಶಕರಾದ ಶ್ರೀ ಇರ್ಫಾನ್ ರಜಾಕ್ ಹಾಗೂ ಅಧಿಕೃತ ಸಹಿದಾರರಾದ ಶ್ರೀ ಪ್ರವೀಣ್ ಕುಮಾರ್.ಎಂ.ಎಸ್ (ಭೂಮಾಲೀಕರು ಹಾಗೂ ಸ.ನಂ 61/2 ರ ಜಮೀನಿನ ಮಾಲೀಕರಾದ ಶ್ರೀ ವಿ.ರಾಮ್ ಪ್ರಸಾದ್ @ ವಿ.ರಾಮಪ್ರಸಾದ್‌ರಾಜು ಬಿನ್ ಲೇ॥ ವಿ.ವರದರಾಜು ರವರ ಪರವಾಗಿ ನೋಂದಾಯಿತ ಜಿಪಿಎದಾರರು) ರವರುಗಳು ಉಲ್ಲೇಖ (1) ರ ಅರ್ಜಿಯಲ್ಲಿ ದೇವನಹಳ್ಳಿ ತಾಲ್ಲೂಕು, ಕುಂದಾಣ ಹೋಬಳಿ, ಹೆಗ್ಗನಹಳ್ಳಿ ಗ್ರಾಮದ ಸ.ನಂ 60/1 ರಲ್ಲಿ 5ಎ-00ಗು, 61/1 ರಲ್ಲಿ 8ಎ-20ಗು, 61/2 ರಲ್ಲಿ 1ಎ-12ಗು, 66 ರಲ್ಲಿ 4ಎ-25ಗು, 67 ರ ಪೈಕಿ 3ಎ-38ಗು, 68/1 ರಲ್ಲಿ 2ಎ-24.08ಗು, 78 ರ ಪೈಕಿ 4ಎ-19ಗು ಒಟ್ಟು 30ಎ-18.08ಗು ಪೈಕಿ ಸ್ಥಳದಲ್ಲಿ ಭೌತಿಕವಾಗಿ ಲಭ್ಯವಿರುವ 28ಎ-23.08ಗು ಅಥವಾ 123275.645 ಚ.ಮೀ ವಿಸ್ತೀರ್ಣ ಪ್ರದೇಶಕ್ಕೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961ರ ಕಲಂ 17 (2ಎ) ರ ಅಡಿಯಲ್ಲಿ ವಸತಿ ವಿನ್ಯಾಸ ನಕ್ಷೆಗೆ ತಾತ್ಕಾಲಿಕ ಅನುಮೋದನೆ ನೀಡಲು ಕೋರಲಾಗಿದೆ.

ಪ್ರಶ್ನಿತ ಜಮೀನುಗಳು ಕಂದಾಯ ದಾಖಲೆಗಳಂತೆ ಒಟ್ಟಾರೆ 31ಎ-06.08ಗು ವಿಸ್ತೀರ್ಣವಿದ್ದು, ಈ ಪೈಕಿ ಸ.ನಂ 67 ರಲ್ಲಿ 3ಎ-38ಗು ಹಾಗೂ ಸ.ನಂ 78 ರಲ್ಲಿ 4ಎ-19ಗು ವಿಸ್ತೀರ್ಣ ಪ್ರದೇಶಕ್ಕೆ ಸೀಮಿತಗೊಳಿಸಿದಂತೆ ಒಟ್ಟಾರೆ 30ಎ-18.08ಗು ವಿಸ್ತೀರ್ಣ ಪ್ರದೇಶದಲ್ಲಿ ವಸತಿ ವಿನ್ಯಾಸ ನಕ್ಷೆಗೆ ಅನುಮೋದನೆ ನೀಡಲು ಕೋರಿದ್ದು, ಸಲ್ಲಿಸಿರುವ ದೃಢೀಕೃತ ಸರ್ವೆ ನಕ್ಷೆಯನ್ವಯ ಪ್ರಶ್ನಿತ ಜಮೀನುಗಳ ಪೈಕಿ ಒಟ್ಟು 2ಎ-22ಗು ವಿಸ್ತೀರ್ಣ ಪ್ರದೇಶ ಒತ್ತುವರಿಯಾಗಿರುವುದಾಗಿ ದಾಖಲಿಸಿದ್ದು, ಸದರಿ ಒತ್ತುವರಿಯಾಗಿರುವ ಪ್ರದೇಶವನ್ನು ಹೊರತುಪಡಿಸಿ, ಉಳಿಕೆ ಸ್ಥಳದಲ್ಲಿ ಭೌತಿಕವಾಗಿ ಲಭ್ಯವಿರುವ 28ಎ-23.08ಗು ವಿಸ್ತೀರ್ಣ ಪ್ರದೇಶದಲ್ಲಿ ವಸತಿ ವಿನ್ಯಾಸ ನಕ್ಷೆಗೆ ಅನುಮೋದನೆ ನೀಡಲು ಕೋರಿರುತ್ತಾರೆ.

ಪ್ರಶ್ನಿತ ಜಮೀನುಗಳು ಸರ್ಕಾರದಿಂದ ಅನುಮೋದನೆಯಾಗಿರುವ ಬೆಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶ ಸ್ಥಳೀಯ ಯೋಜನಾ ಪ್ರದೇಶದ ಮಹಾಯೋಜನೆ - 2021 ರಲ್ಲಿ ವ್ಯವಸಾಯ ಭೂಉಪಯೋಗ ವಲಯದಲ್ಲಿ ಇರುತ್ತದೆ. ಉಲ್ಲೇಖ (2) ರ ಸರ್ಕಾರದ ಆದೇಶದಂತೆ, ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 14(ಎ) ರಡಿಯಲ್ಲಿ ಪ್ರಸ್ತಾಪಿತ ಜಮೀನುಗಳು ವ್ಯವಸಾಯ ಭೂಉಪಯೋಗ ವಲಯದಿಂದ ವಸತಿ ವಲಯಕ್ಕೆ ಭೂಉಪಯೋಗ ಬದಲಾವಣೆಯಾಗಿರುತ್ತದೆ. ಅದರಂತೆ ಉಲ್ಲೇಖ (3) ರಲ್ಲಿ ಈ ಪ್ರಾಧಿಕಾರದಿಂದ ಭೂಉಪಯೋಗ ಬದಲಾವಣೆಗೆ ಸಂಬಂಧಿಸಿದಂತೆ ಆದೇಶ ಪತ್ರ ನೀಡಲಾಗಿರುತ್ತದೆ. ಜಿಲ್ಲಾಧಿಕಾರಿಗಳು, ಬೆಂಗಳೂರು ಗ್ರಾಮಾಂತರ ಜಿಲ್ಲೆ ರವರಿಂದ ಉಲ್ಲೇಖ (4) ರ ಅಧಿಕೃತ ಜ್ಞಾಪನ ಪತ್ರದಂತೆ ವಸತಿ ಉದ್ದೇಶಕ್ಕಾಗಿ ಭೂಪರಿವರ್ತನೆಯಾಗಿರುತ್ತದೆ.

ಉಲ್ಲೇಖ (5) ರ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ದಂಡಾಧಿಕಾರಿಗಳು, ಬೆಂಗಳೂರು ಗ್ರಾಮಾಂತರ ಜಿಲ್ಲೆ ರವರ ಅಧಿಕೃತ ಜ್ಞಾಪನ ಪತ್ರದಲ್ಲಿ ಅರ್ಜಿತ ಸಂಸ್ಥೆಗಳ ಮನವಿ, ತಹಶೀಲ್ದಾರ್, ದೇವನಹಳ್ಳಿ, ತಾಲ್ಲೂಕು ರವರ ವರದಿಯ ಮೇರೆಗೆ ಭೂ ದಾಖಲೆಗಳ ಸಹಾಯಕ ನಿರ್ದೇಶಕರು, ದೇವನಹಳ್ಳಿ ತಾಲ್ಲೂಕು ರವರು ನಕ್ಷೆಯಲ್ಲಿ ಗುರುತಿಸಿರುವಂತೆ ದೇವನಹಳ್ಳಿ ತಾಲ್ಲೂಕು, ಕುಂದಾಣ ಹೋಬಳಿ, ಹೆಗ್ಗನಹಳ್ಳಿ, ಗ್ರಾಮದ ಸ.ನಂ 60/1, 66, 67, 68/1 ಮತ್ತು 78ರ ಜಮೀನುಗಳಲ್ಲಿ ಹಾದು ಹೋಗಿರುವ 0-15 ಗುಂಟೆ ವಿಸ್ತೀರ್ಣದ ಕಾಲುದಾರಿಯನ್ನು 0-17 ಗುಂಟೆ ವಿಸ್ತೀರ್ಣಕ್ಕೆ ಯಾವುದೇ ಪರಿಹಾರವನ್ನು ಅಪೇಕ್ಷಿಸದೇ Relinquishment ಬರೆದುಕೊಡುವ ಷರತ್ತಿಗೆ ಒಳಪಡಿಸಿ, ಕರ್ನಾಟಕ ಭೂಮಂಜೂರಾತಿ ನಿಯಮಾವಳಿ

# ಬೆಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರ, ದೇವನಹಳ್ಳಿ

ನಂ. 333/1, ಮೊದಲನೇ ಮಹಡಿ, ವಿ.ಜಿ. ಕಾಂಪ್ಲೆಕ್ಸ್, ಶಾಂತಿನಗರ, ಸೂಲಿಬೆಲೆ ರಸ್ತೆ, ದೇವನಹಳ್ಳಿ ಟೌನ್, ಬೆಂಗಳೂರು ಗ್ರಾಮಾಂತರ ಜಿಲ್ಲೆ–562110
ದೂ. : 080–29566001, 080–27682035 ಇಮೇಲ್ : biaapa.devanahalli@gmail.com ವೆಬ್‌ಸೈಟ್ : www.biaapa.tpa.gov.in


1969ರ ನಿಯಮ 28(ಎ)(1)(2)(3) ರಡಿ ಪಥ ಬದಲಾವಣೆ ಮಾಡಿ, ಕರ್ನಾಟಕ ಭೂಕಂದಾಯ ಕಾಯ್ದೆ 1964ರ ಕಲಂ 71ರಡಿಯಲ್ಲಿ ಕಾಯ್ದಿರಿಸಿ, ಕರ್ನಾಟಕ ಭೂಕಂದಾಯ ನಿಯಮಾವಳಿ 1966ರ ನಿಯಮ 73ರಡಿಯಲ್ಲಿ ಗ್ರಾಮ ನಕಾಶೆಯಲ್ಲಿ ಸೂಕ್ತ ಮಾರ್ಪಾಡು ಮಾಡಲು ಕರ್ನಾಟಕ ಭೂಮಂಜೂರಾತಿ ನಿಯಮಗಳು 1969ರ ನಿಯಮ 13 ರಲ್ಲಿನ ನಿಬಂಧನೆಗಳಿಗೆ ಹಾಗೂ ಕೆಲವು ಸಾಮಾನ್ಯ ಷರತ್ತುಗಳಿಗೊಳಪಡಿಸಿ ಆದೇಶಿಸಲಾಗಿರುತ್ತದೆ.

ಸರ್ಕಾರದ ಅಧಿಸೂಚನೆ ಸಂಖ್ಯೆ : ಯುಡಿಡಿ234ಬಿಎಂಆರ್2023, ದಿನಾಂಕ: 20/11/2023 ರಂತೆ ಅನುಮೋದನೆಯಾದ ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರದ ನಿಯಮಗಳು 2020 ರಲ್ಲಿನ ನಿಯಮ 18 (5) ರನ್ವಯ ಮತ್ತು ದಿನಾಂಕ: 27/12/2023 & 03/02/2024 ರಂದು ಮಹಾನಗರ ಆಯುಕ್ತರು, ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರ ಇವರು ಅಧಿಕೃತ ಜ್ಞಾಪನಾ ಪತ್ರದಲ್ಲಿ ಸೂಚಿಸಿರುವಂತೆ ಸದರಿ ವಸತಿ ವಿನ್ಯಾಸ ನಕ್ಷೆಗೆ ತಾತ್ಕಾಲಿಕ ಅನುಮೋದನೆ ನೀಡುವ ಸಂಬಂಧ ಪೂರ್ವ ಸಮ್ಮತಿಗಾಗಿ ಉಲ್ಲೇಖ (6) ರಲ್ಲಿ ಮಹಾನಗರ ಯೋಜಕರು, ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರ ರವರನ್ನು ಕೋರಲಾಗಿದ್ದು, ಉಲ್ಲೇಖ (7) ರಂತೆ ಮಹಾನಗರ ಯೋಜಕರು, ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರ ರವರು ಹಲವು ಷರತ್ತುಗಳಿಗೆ ಒಳಪಟ್ಟು ವಸತಿ ವಿನ್ಯಾಸ ನಕ್ಷೆಗೆ ತಾತ್ಕಾಲಿಕ ಅನುಮೋದನೆ ನೀಡಲು ಸಮ್ಮತಿ ನೀಡಿರುತ್ತಾರೆ.

ಸರ್ಕಾರದ ಅಧಿಸೂಚನೆ ಸಂಖ್ಯೆ: ಸಂವ್ಯಶಾಇ24 ಶಾಸನ2015, ದಿನಾಂಕ: 10/09/2015 ರನ್ವಯ ಕಾಯ್ದೆಗೆ ತಿದ್ದುಪಡಿಯಾಗಿರುವಂತೆ ಕೆಟಿಸಿಪಿ ಕಾಯ್ದೆ 1961 ರ ಪ್ರಕರಣ 17(2)(ಎ) ರಂತೆ ಸದರಿ ವಸತಿ ವಿನ್ಯಾಸ ನಕ್ಷೆಗೆ ತಾತ್ಕಾಲಿಕ ಅನುಮೋದನೆ ನೀಡುವ ಸಂಬಂಧ ಉಲ್ಲೇಖ (8) ರ ದಿನಾಂಕ: 23/04/2025 ರಂದು ನಡೆದ ಪ್ರಾಧಿಕಾರದ 146 ನೇ ಸಭೆಯ ವಿಷಯ ಸಂಖ್ಯೆ: 146.66 ರ ನಡಾವಳಿಯಲ್ಲಿ ಮಹಾನಗರ ಯೋಜಕರು, ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರ ರವರು ನೀಡಿರುವ ಸಮ್ಮತಿಯಂತೆ ಪ್ರಸ್ತಾವನೆ ಸಂಬಂಧ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣಾ ಮಂಡಳಿಯಿಂದ ನಿರಾಕ್ಷೇಪಣಾ ಪತ್ರ ಪಡೆದುಕೊಂಡು ಹಾಗೂ ದಿನಾಂಕ:05.04.2024 ರಂದು ನೆಲಮಂಗಲ ಯೋಜನಾ ಪ್ರಾಧಿಕಾರದಲ್ಲಿ ಮಹಾನಗರ ಆಯುಕ್ತರು, ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರ ರವರ ಅಧ್ಯಕ್ಷತೆಯಲ್ಲಿ ಪ್ರಗತಿ ಪರಿಶೀಲನಾ ಸಭೆಯ ವಿಷಯ ಸಂಖ್ಯೆ:3/2024 ರ ನಿರ್ಣಯದಂತೆ ಉದ್ಯಾನವನ / ನಾಗರೀಕ ಸೌಲಭ್ಯ ನಿವೇಶನವನ್ನು ಅಳವಡಿಸಿ ವಸತಿ ವಿನ್ಯಾಸ ನಕ್ಷೆಯನ್ನು ವಲಯ ನಿಯಮಾವಳಿಗಳಿಗೆ ಅನುಗುಣವಾಗಿ ಪರಿಷ್ಕರಿಸಿಕೊಂಡು, ದೇವನಹಳ್ಳಿ ತಾಲ್ಲೂಕು, ಕುಂದಾಣ ಹೋಬಳಿ, ಹೆಗ್ಗನಹಳ್ಳಿ ಗ್ರಾಮದ ಸ.ನಂ 60/1 ರಲ್ಲಿ 5ಎ–00ಗು, 61/1 ರಲ್ಲಿ 8ಎ–20ಗು, 61/2 ರಲ್ಲಿ 1ಎ–12ಗು, 66 ರಲ್ಲಿ 4ಎ–25ಗು, 67 ರ ಪೈಕಿ 3ಎ–38ಗು, 68/1 ರಲ್ಲಿ 2ಎ–24.08ಗು, 78 ರ ಪೈಕಿ 4ಎ–19ಗು ಒಟ್ಟು 30ಎ–18.08ಗು ಪೈಕಿ ಸ್ಥಳದಲ್ಲಿ ಭೌತಿಕವಾಗಿ ಲಭ್ಯವಿರುವ 28ಎ–23.08ಗು ಅಥವಾ 123275.645 ಚ.ಮೀ ವಿಸ್ತೀರ್ಣದ ಪ್ರದೇಶದಲ್ಲಿ ವಸತಿ ವಿನ್ಯಾಸ ನಕ್ಷೆಗೆ ಪ್ರಾಧಿಕಾರದ ಸಾಮಾನ್ಯ ಷರತ್ತುಗಳಿಗೆ ಒಳಪಡಿಸಿ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961ರ ಕಲಂ 17 (2ಎ) ರ ಅಡಿಯಲ್ಲಿ ವಸತಿ ವಿನ್ಯಾಸ ನಕ್ಷೆಗೆ "Demarcation & Development" ಉದ್ದೇಶಕ್ಕೆ ತಾತ್ಕಾಲಿಕ ಅನುಮೋದನೆಯನ್ನು ನೀಡಲು ತೀರ್ಮಾನಿಸಲಾಯಿತು. ಹಾಗೂ ಅರ್ಜಿದಾರರು ವಸತಿ ವಿನ್ಯಾಸದಲ್ಲಿನ ಮೊದಲನೇ ಹಂತದ ಶೇ 40 ರಷ್ಟು ನಿವೇಶನಗಳನ್ನು ಬಿಡುಗಡೆ ಮಾಡಲು ಇಚ್ಛಿಸಿದ್ದಲ್ಲಿ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961ರ ಕಲಂ 17(2)(ಸಿ) ರ ಅಡಿಯಲ್ಲಿ ಮೊದಲನೇ ಹಂತದ ಶೇ 40 ರಷ್ಟು ನಿವೇಶನಗಳನ್ನು ನೋಂದಣಿಗಾಗಿ ಬಿಡುಗಡೆ ಮಾಡಲು ಸಹ ತೀರ್ಮಾನಿಸಲಾಗಿರುತ್ತದೆ.

ಉಲ್ಲೇಖ (9) ರ ಪ್ರಾಧಿಕಾರದ ಹಿಂಬರಹ ಪತ್ರದಲ್ಲಿ ಸಲ್ಲಿಸಿರುವ ಭೂಮಾಲೀಕತ್ವ ದಾಖಲೆಗಳನ್ನು ಪರಿಶೀಲಿಸಲಾಗಿ, ಹೆಗ್ಗನಹಳ್ಳಿ ಗ್ರಾಮದ ಸ.ನಂ 61/2 ರ ಜಮೀನಿನ ಪಹಣಿ ಹಾಗೂ ಭೂಪರಿವರ್ತನೆ ಆದೇಶಗಳಂತೆ ಶ್ರೀ ಹೆಚ್.ಎ ಸೋಮಶೇಖರ್ ಬಿನ್ ಲೇ॥ ಆಂಜಿನಪ್ಪ ರವರ ಮಾಲೀಕತ್ವದಲ್ಲಿರುವುದಾಗಿ ನಮೂದಿಸಿದ್ದು, ಆದರೆ ಸದರಿ ಜಮೀನಿನ ಜಿಪಿಎ ಪತ್ರದಂತೆ ಶ್ರೀ ವಿ.ರಾಮ್‌ಪ್ರಸಾದ್ @ ವಿ.ರಾಮಪ್ರಸಾದ್ ರಾಜು ಬಿನ್ ಲೇ॥ ವಿ.ವರದರಾಜು ರವರಿಂದ ಮೆ॥ ಪಿನಾಕಲ್ ಇನ್ವೆಸ್ಟ್‌ಮೆಂಟ್ಸ್ ರ ಪರವಾಗಿ ಪಾಲುದಾರರಾದ ಮೆ॥ ಐಎನ್‌ಆರ್ ಎನರ್ಜಿ ಪ್ರೈವೇಟ್ ಲಿಮಿಟೆಡ್ ರ ಪರವಾಗಿ ನಿರ್ದೇಶಕರಾದ ಶ್ರೀ ಇರ್ಫಾನ್ ರಜಾಕ್ ರವರ ಹೆಸರಿಗೆ ನೋಂದಾಯಿಸಿರುವುದು

ಕಂಡುಬಂದಿರುತ್ತದೆ. ಹಾಗಾಗಿ ಪ್ರಶ್ನಿತ ಸ.ನಂ 61/2 ರ ಜಮೀನಿನ ಭೂ ಮಾಲೀಕತ್ವದ ಬಗ್ಗೆ ವ್ಯತ್ಯಾಸ ಇರುವುದು ಕಂಡುಬಂದಿದ್ದು, ಈ ಬಗ್ಗೆ ಅಗತ್ಯ ದಾಖಲೆಗಳೊಂದಿಗೆ ಸ್ಪಷ್ಟೀಕರಣ ಸಲ್ಲಿಸುವಂತೆ, ದಿನಾಂಕ:05.04.2024 ರಂದು ನೆಲಮಂಗಲ ಯೋಜನಾ ಪ್ರಾಧಿಕಾರದಲ್ಲಿ ಮಹಾನಗರ ಆಯುಕ್ತರು, ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರ ರವರ ಅಧ್ಯಕ್ಷತೆಯಲ್ಲಿ ಪ್ರಗತಿ ಪರಿಶೀಲನಾ ಸಭೆಯ ವಿಷಯ ಸಂಖ್ಯೆ:3/2024 ರ ನಿರ್ಣಯದಂತೆ ಉದ್ಯಾನವನ / ನಾಗರೀಕ ಸೌಲಭ್ಯ ನಿವೇಶನ ಪ್ರದೇಶಗಳನ್ನು ಅಳವಡಿಸಿ ವಸತಿ ವಿನ್ಯಾಸ ನಕ್ಷೆಯನ್ನು ವಲಯ ನಿಯಮಾವಳಿಗಳಿಗೆ ಅನುಗುಣವಾಗಿ ತಯಾರಿಸಿ ಅರ್ಜಿದಾರರ ಹಾಗೂ ಅಭಿಯಂತರರುಗಳ ಸಹಿಯೊಂದಿಗೆ ಸಲ್ಲಿಸುವಂತೆ ಹಾಗೂ ಪ್ರಸ್ತಾವನೆ ಸಂಬಂಧ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣಾ ಮಂಡಳಿಯಿಂದ ನಿರಾಕ್ಷೇಪಣಾ ಪತ್ರ ಪಡೆದು ಸಲ್ಲುಸುವಂತೆ ಸೂಚಿಸಲಾಗಿತ್ತು.

ಉಲ್ಲೇಖ (10) ರಂತೆ ಮೆ॥ ಪಿನಾಕಲ್ ಇನ್ವೆಸ್ಟ್‌ಮೆಂಟ್ಸ್ ರ ಪರವಾಗಿ ಪಾಲುದಾರರಾದ ಮೆ॥ ಐಎನ್‌ಆರ್ ಎನರ್ಜಿ ಪ್ರೈವೇಟ್ ಲಿಮಿಟೆಡ್ ರ ಪರವಾಗಿ ನಿರ್ದೇಶಕರಾದ ಶ್ರೀ ಇರ್ಫಾನ್ ರಜಾಕ್ ಹಾಗೂ ಅಧಿಕೃತ ಸಹಿದಾರರಾದ ಶ್ರೀ ಪ್ರವೀಣ್ ಕುಮಾರ್.ಎಂ.ಎಸ್ ರವರುಗಳು ಪ್ರಾಧಿಕಾರಕ್ಕೆ ಮನವಿ ಸಲ್ಲಿಸಿ, ಪ್ರಸ್ತಾವನೆ ಸಂಬಂಧ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣಾ ಮಂಡಳಿಯಿಂದ ನಿರಾಕ್ಷೇಪಣಾ ಪತ್ರ ಪಡೆದು ಸಲ್ಲಿಸುವಂತೆ ಸೂಚಿಸಲಾಗಿದ್ದು, ಸದರಿ ವಸತಿ ವಿನ್ಯಾಸ ನಕ್ಷೆಗೆ ತಾತ್ಕಾಲಿಕ ಅನುಮೋದನೆ ಪಡೆದುಕೊಂಡ ನಂತರ ನಿವೇಶನಗಳನ್ನು ಬಿಡುಗಡೆ ಪಡೆದುಕೊಳ್ಳುವ ಮುನ್ನ ಸದರಿ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣಾ ಮಂಡಳಿಯಿಂದ ನಿರಾಕ್ಷೇಪಣಾ ಪತ್ರವನ್ನು ಸಲ್ಲಿಸುವುದಾಗಿ ತಿಳಿಸುತ್ತಾ, ಉದ್ಯಾನವನ / ನಾಗರೀಕ ಸೌಲಭ್ಯ ನಿವೇಶನ ಪ್ರದೇಶಗಳನ್ನು ಅಳವಡಿಸಿ ವಸತಿ ವಿನ್ಯಾಸ ನಕ್ಷೆಯನ್ನು ವಲಯ ನಿಯಮಾವಳಿಗಳಿಗೆ ಅನುಗುಣವಾಗಿ ತಯಾರಿಸಿ ಸಲ್ಲಿಸುತ್ತಾ, ದೇವನಹಳ್ಳಿ ತಾಲ್ಲೂಕು, ಕುಂದಾಣ ಹೋಬಳಿ, ಹೆಗ್ಗನಹಳ್ಳಿ ಗ್ರಾಮದ ಸ.ನಂ 61/2 ರಲ್ಲಿ 1ಎ–12ಗು ವಿಸ್ತೀರ್ಣ ಪ್ರದೇಶವನ್ನು ಹೊರತುಪಡಿಸಿ ಉಳಿದಂತೆ ದೇವನಹಳ್ಳಿ ತಾಲ್ಲೂಕು, ಕುಂದಾಣ ಹೋಬಳಿ, ಹೆಗ್ಗನಹಳ್ಳಿ ಗ್ರಾಮದ ಸ.ನಂ 60/1 ರಲ್ಲಿ 5ಎ–00ಗು, 61/1 ರಲ್ಲಿ 8ಎ–20ಗು, 66 ರಲ್ಲಿ 4ಎ–25ಗು, 67 ರ ಪೈಕಿ 3ಎ–38ಗು, 68/1 ರಲ್ಲಿ 2ಎ–24.08ಗು, 78 ರ ಪೈಕಿ 4ಎ–19ಗು ಒಟ್ಟು 29ಎ–06.08ಗು ಪೈಕಿ ಸ್ಥಳದಲ್ಲಿ ಭೌತಿಕವಾಗಿ ಲಭ್ಯವಿರುವ 27ಎ–11.08ಗು ವಿಸ್ತೀರ್ಣ ಪ್ರದೇಶದಲ್ಲಿ ವಸತಿ ವಿನ್ಯಾಸ ನಕ್ಷೆಗೆ ತಾತ್ಕಾಲಿಕ ಅನುಮೋದನೆ ನೀಡಲು ಕೋರಿರುತ್ತಾರೆ. ಅರ್ಜಿದಾರರು ಸಲ್ಲಿಸಿರುವ ವಸತಿ ವಿನ್ಯಾಸ ನಕ್ಷೆಯಂತೆ ವಿವಿಧ ಭೂಉಪಯೋಗಗಳ ವಿವರಗಳು ಈ ಕೆಳಕಂಡಂತೆ ಇರುತ್ತದೆ.

| ಕ್ರ ಸಂ | ಭೂಉಪಯೋಗ ವಿವರ | ನಕ್ಷೆಯ ರೀತ್ಯ | | ವಲಯ ನಿಯಮಾವಳಿ ರೀತ್ಯ ಶೇಕಡಾವಾರು |
|---|---|---|---|---|
| | | ವಿಸ್ತೀರ್ಣ ಚ.ಮೀ. ನಲ್ಲಿ | ಶೇಕಡಾವಾರು | |
| 1. | ವಸತಿಗಾಗಿ | 58668.63 | 53.15 | ಗರಿಷ್ಠ ಶೇ. 55 |
| 2. | ವಾಣಿಜ್ಯಕ್ಕಾಗಿ | 2025.12 | 1.83 | |
| 3. | ಉದ್ಯಾನವನಕ್ಕಾಗಿ | 11053.33 | 10.01 | ಕನಿಷ್ಠ ಶೇ. 10 |
| 4. | ನಾಗರೀಕ ಸೌಲಭ್ಯಕ್ಕಾಗಿ | 5519.56 | 5.01 | ಕನಿಷ್ಠ ಶೇ. 05 |
| 5. | ರಸ್ತೆ | 33117.72 | 30.00 | – |
| | **ಒಟ್ಟು** | **110384.36** | **100** | |

ಪ್ರಾಧಿಕಾರದ ಸಭೆಯ ನಡಾವಳಿಯ ರೀತ್ಯ ಉಲ್ಲೇಖ (11) ರ ಈ ಕಛೇರಿಯ ಶುಲ್ಕ ಪಾವತಿ ಸೂಚನಾ ಪತ್ರದಲ್ಲಿ ನಿಗಧಿತ ಶುಲ್ಕಗಳನ್ನು ಪಾವತಿಸಿ, ಅಗತ್ಯ ದಾಖಲೆಗಳೊಂದಿಗೆ ಸಲ್ಲಿಸುವಂತೆ ಸೂಚಿಸಲಾಗಿರುವ ಹಿನ್ನೆಲೆಯಲ್ಲಿ ಅರ್ಜಿದಾರರು ಉಲ್ಲೇಖ (12) ರಂತೆ ನಿಗಧಿತ ಶುಲ್ಕಗಳನ್ನು ಪಾವತಿಸಿ, ಇತರೆ ಅಗತ್ಯ ದಾಖಲೆಗಳೊಂದಿಗೆ ವಲಯ ನಿಯಮಾವಳಿಗಳ ರೀತ್ಯ ವಸತಿ ವಿನ್ಯಾಸ ನಕ್ಷೆಯ ನೀಲಿ ಪ್ರತಿಗಳನ್ನು ಸಲ್ಲಿಸಿ ವಸತಿ ವಿನ್ಯಾಸ ನಕ್ಷೆಗೆ ಅನುಮೋದನೆ ನೀಡಲು ಕೋರಿರುತ್ತಾರೆ.

# ಬೆಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರ, ದೇವನಹಳ್ಳಿ

ನಂ. 333/1, ಮೊದಲನೇ ಮಹಡಿ, ವಿ.ಜಿ. ಕಾಂಪ್ಲೆಕ್ಸ್, ಶಾಂತಿನಗರ, ಸೂಲಿಬೆಲೆ ರಸ್ತೆ, ದೇವನಹಳ್ಳಿ ಟೌನ್, ಬೆಂಗಳೂರು ಗ್ರಾಮಾಂತರ ಜಿಲ್ಲೆ–562110

ದೂ. : 080–29566001, 080–27682035 ಇಮೇಲ್ : biaapa.devanahalli@gmail.com ವೆಬ್‌ಸೈಟ್ : www.biaapa.tpa.gov.in


ಮೇಲ್ಕಂಡ ಅಂಶಗಳನ್ವಯ ಸರ್ಕಾರದ ಅಧಿಸೂಚನೆ ಸಂಖ್ಯೆ: ನಅಇ/157/ಬಿಎಂಆರ್/2005 ದಿನಾಂಕ: 27/01/2009 ಮತ್ತು ತಿದ್ದುಪಡಿ ಆದೇಶ ದಿನಾಂಕ: 29/01/2009 ರಲ್ಲಿ ಪ್ರಾಧಿಕಾರದ ಸ್ಥಳೀಯ ಯೋಜನಾ ಪ್ರದೇಶಕ್ಕೆ ಅನುಮೋದನೆಗೊಂಡಿರುವ ಮಹಾಯೋಜನೆಯ ವಲಯ ನಿಯಮಾವಳಿಗಳ ಅನುಸಾರ, ಉಲ್ಲೇಖ (8) ರ ಪ್ರಾಧಿಕಾರದ ಸಭೆಯ ನಡಾವಳಿಯ ರೀತ್ಯ ಹಾಗೂ ಉಲ್ಲೇಖ (13) ರ ಸರ್ಕಾರದ ಅಧಿಸೂಚನೆಗಳನ್ವಯ ದೇವನಹಳ್ಳಿ ತಾಲ್ಲೂಕು, ಕುಂದಾಣ ಹೋಬಳಿ, ಹೆಗ್ಗನಹಳ್ಳಿ ಗ್ರಾಮದ ಸ.ನಂ 61/2 ರಲ್ಲಿನ 1ಎ–12ಗು ವಿಸ್ತೀರ್ಣದ ಪ್ರದೇಶವನ್ನು ಹೊರತುಪಡಿಸಿ ಉಳಿದಂತೆ ದೇವನಹಳ್ಳಿ ತಾಲ್ಲೂಕು, ಕುಂದಾಣ ಹೋಬಳಿ, ಹೆಗ್ಗನಹಳ್ಳಿ ಗ್ರಾಮದ ಸ.ನಂ 60/1 ರಲ್ಲಿ 5ಎ–00ಗು, 61/1 ರಲ್ಲಿ 8ಎ–20ಗು, 66 ರಲ್ಲಿ 4ಎ–25ಗು, 67 ರ ಪೈಕಿ 3ಎ–38ಗು, 68/1 ರಲ್ಲಿ 2ಎ–24.08ಗು, 78 ರ ಪೈಕಿ 4ಎ–19ಗು ಒಟ್ಟು 29ಎ–06.08ಗು ಪೈಕಿ ಸ್ಥಳದಲ್ಲಿ ಭೌತಿಕವಾಗಿ ಲಭ್ಯವಿರುವ 27ಎ–11.08ಗು ವಿಸ್ತೀರ್ಣದ ಪ್ರದೇಶಕ್ಕೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961ರ ಕಲಂ 17 (2ಎ) ರನ್ವಯ ವಸತಿ ವಿನ್ಯಾಸ ನಕ್ಷೆಗೆ ಈ ಕೆಳಕಂಡ ಷರತ್ತುಗಳಿಗೆ ಒಳಪಡಿಸಿ "ತಾತ್ಕಾಲಿಕ ಅನುಮೋದನೆ" ನೀಡಲು ಆದೇಶಿಸಲಾಗಿದೆ.

**ಆದೇಶ ಸಂಖ್ಯೆ: ಬಿಐಎಎಪಿಎ/ಟಿಪಿ/ಎಲ್‌ಎಒ/142/2024–25/25–26,** 1163 **ದಿನಾಂಕ:** 15 JUL 2025

**ಆದೇಶ**

ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ (ತಿದ್ದುಪಡಿ) ಕಾಯ್ದೆ 2015 ರ ಕಲಂ 17(2) (ಎ) ರಡಿಯಲ್ಲಿ ದೇವನಹಳ್ಳಿ ತಾಲ್ಲೂಕು, ಕುಂದಾಣ ಹೋಬಳಿ, ಹೆಗ್ಗನಹಳ್ಳಿ ಗ್ರಾಮದ ಸ.ನಂ 61/2 ರಲ್ಲಿ 1ಎ–12ಗು ವಿಸ್ತೀರ್ಣದ ಪ್ರದೇಶವನ್ನು ಹೊರತುಪಡಿಸಿ ಉಳಿದಂತೆ ದೇವನಹಳ್ಳಿ ತಾಲ್ಲೂಕು, ಕುಂದಾಣ ಹೋಬಳಿ, ಹೆಗ್ಗನಹಳ್ಳಿ ಗ್ರಾಮದ ಸ.ನಂ 60/1 ರಲ್ಲಿ 5ಎ–00ಗು, 61/1 ರಲ್ಲಿ 8ಎ–20ಗು, 66 ರಲ್ಲಿ 4ಎ–25ಗು, 67 ರ ಪೈಕಿ 3ಎ–38ಗು, 68/1 ರಲ್ಲಿ 2ಎ–24.08ಗು, 78 ರ ಪೈಕಿ 4ಎ–19ಗು ಒಟ್ಟು 29ಎ–06.08ಗು ಪೈಕಿ ಸ್ಥಳದಲ್ಲಿ ಭೌತಿಕವಾಗಿ ಲಭ್ಯವಿರುವ 27ಎ–11.08ಗು ವಿಸ್ತೀರ್ಣ ಪ್ರದೇಶವನ್ನು ಮಟ್ಟ ಮಾಡುವುದು, ನೆಲಗಟ್ಟಿ ಹಾಸುವುದು, ಜಲ್ಲಿಕಲ್ಲನ್ನು ಹಾಸುವುದು, ಕಲ್ಲುಚಪ್ಪಡಿ ಹಾಕುವುದು, ನಾಲೆಗಳ ನಿರ್ಮಾಣ, ಚರಂಡಿಗಳ ನಿರ್ಮಾಣ, ಮೋರಿಗಳ ನಿರ್ಮಾಣ, ಬೀದಿ ದೀಪದ ವ್ಯವಸ್ಥೆ ಮತ್ತು ನೀರು ಸರಬರಾಜಿಗೆ ಮಾಡಬೇಕಾದ ವ್ಯವಸ್ಥೆಗಳನ್ನೊಳಗೊಂಡಂತೆ ನಿವೇಶನಗಳು ರಸ್ತೆ ಪಂಕ್ತೀಕರಣ, ಉದ್ಯಾನವನ ಮತ್ತು ನಾಲಾ ಪ್ರದೇಶ ಮಳೆನೀರು ಸಂಗ್ರಹಣೆ ಘಟಕ (Rain water Harvesting), Sewage Treatment Plant (ಘನತ್ಯಾಜ್ಯ ನೀರು ಸಂಸ್ಕರಣಾ ಘಟಕ)/ ಸೋಕ್‌ಪಿಟ್ ಮತ್ತು ಯಾವುದೇ ಇತರೆ ಮೂಲ ಸೌಕರ್ಯವನ್ನು ತೋರಿಸಿ ಗಡಿ ನಿರ್ಧಾರ ಮತ್ತು ಅಭಿವೃದ್ಧಿ ಉದ್ದೇಶಗಳಿಗಾಗಿ ಮಾತ್ರ ಈ ಕೆಳಕಂಡ ನಿಬಂಧನೆಗಳಿಗೆ ಒಳಪಡಿಸಿ, ವಸತಿ ವಿನ್ಯಾಸ ನಕ್ಷೆಗೆ "ತಾತ್ಕಾಲಿಕ ಅನುಮೋದನೆ" ನೀಡಲಾಗಿದೆ.

**– : ನಿಬಂಧನೆಗಳು :–**

1) ತಾತ್ಕಾಲಿಕ ವಸತಿ ವಿನ್ಯಾಸ ನಕ್ಷೆ ಮಂಜೂರಾತಿಯ ಅವಧಿಯು ಮಂಜೂರಾತಿ ನೀಡಿದ ದಿನದಿಂದ 02 ವರ್ಷಗಳವರೆಗೆ ಮಾತ್ರ ಜಾರಿಯಲ್ಲಿರುತ್ತದೆ. ಈ ಅವಧಿಯಲ್ಲಿ ವಸತಿ ವಿನ್ಯಾಸದ ಅಭಿವೃದ್ಧಿ ಕಾರ್ಯ ಪೂರ್ಣಗೊಳಿಸದಿದ್ದಲ್ಲಿ ತಾತ್ಕಾಲಿಕ ಅನುಮೋದಿತ ವಸತಿ ವಿನ್ಯಾಸ ನಕ್ಷೆ ಅನುಮತಿಯನ್ನು ನವೀಕರಿಸಿಕೊಳ್ಳತಕ್ಕದ್ದು.
2) ಪ್ರಸ್ತಾಪಿತ ವಸತಿ ವಿನ್ಯಾಸಕ್ಕೆ ಅಭಿವೃದ್ಧಿ ಕಾಮಗಾರಿಗಳನ್ನು ಪೂರ್ಣಗೊಳಿಸಿ, ಅಂತಿಮ ಅನುಮೋದನೆ ಪಡೆಯುವ ಪೂರ್ವದಲ್ಲಿ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣಾ ಮಂಡಳಿಯಿಂದ ನಿರಾಕ್ಷೇಪಣಾ ಪತ್ರವನ್ನು ಪಡೆದು ಸಲ್ಲಿಸುವ ಷರತ್ತಿಗೊಳಪಟ್ಟಿರುತ್ತದೆ.
3) ಪ್ರಾಧಿಕಾರಕ್ಕೆ ಸಮಾಧಾನವಾಗುವಂತೆ ಮಟ್ಟ ಮಾಡುವುದು, ನೆಲಗಟ್ಟು ಹಾಸುವುದು, ಜಲ್ಲಿಕಲ್ಲನ್ನು ಹಾಸುವುದು, ಕಲ್ಲು ಚಪ್ಪಡಿ ಹಾಕುವುದು, ನಾಲೆಗಳ ನಿರ್ಮಾಣ, ಚರಂಡಿಗಳ ನಿರ್ಮಾಣ, ಮೋರಿಗಳ ನಿರ್ಮಾಣ, ಬೀದಿದೀಪದ ವ್ಯವಸ್ಥೆ ಮತ್ತು ನೀರು ಸರಬರಾಜಿಗೆ ಮಾಡಬೇಕಾದ ವ್ಯವಸ್ಥೆಯನ್ನೊಳಗೊಂಡಂತೆ ನಿವೇಶನಗಳು, ರಸ್ತೆ ಪಂಕ್ತೀಕರಣ, ಉದ್ಯಾನವನ, ನಾಗರೀಕ ಸೌಲಭ್ಯ ಪ್ರದೇಶ ಮತ್ತು ಯಾವುದೇ ಇತರೆ ಮೂಲ ಸೌಕರ್ಯವನ್ನು ತೋರಿಸಿ, ಗಡಿ ನಿರ್ಧಾರ ಮತ್ತು ಅಭಿವೃದ್ಧಿ ಉದ್ದೇಶಗಳಿಗಾಗಿ ನಿಯಮಿಸಬಹುದಾದ ಅಂಥ ನಿಯಮಗಳಿಗೆ ಅನುಸಾರವಾಗಿ ತಾತ್ಕಾಲಿಕ ವಸತಿ ವಿನ್ಯಾಸ ನಕ್ಷೆಗೆ ಮಂಜೂರಾತಿಯನ್ನು ನೀಡಲಾಗಿದೆ.

4) ತಾತ್ಕಾಲಿಕ ಅನುಮೋದಿತ ವಸತಿ ವಿನ್ಯಾಸ ನಕ್ಷೆ ರೀತ್ಯ ಮಾಲೀಕನು ಯಾವುದೇ ಪರಿಹಾರವನ್ನು ಕ್ಲೇಮು ಮಾಡದೆಯೇ ಉಚಿತವಾಗಿ ನೋಂದಾಯಿತ ಪರಿತ್ಯಾಜನಾ ಪತ್ರದ ಮುಖಾಂತರ ನಾಗರೀಕ ಸೌಲಭ್ಯ ಪ್ರದೇಶಗಳನ್ನು ಈ ಪ್ರಾಧಿಕಾರಕ್ಕೆ ಹಾಗೂ ಸಾರ್ವಜನಿಕ ಉಪಯೋಗದ ಉದ್ಯಾನವನ ಹಾಗೂ ರಸ್ತೆಗಳನ್ನು ಸಂಬಂಧಿಸಿದ ಸ್ಥಳೀಯ ಸಂಸ್ಥೆಗೆ ಹಸ್ತಾಂತರಿಸತಕ್ಕದ್ದು. ನಾಗರೀಕ ಸೌಲಭ್ಯ ನಿವೇಶನ ಮತ್ತು ಉದ್ಯಾನವನ ಪ್ರದೇಶಗಳಿಗೆ Foundation with Chain Link Fencing ಅಳವಡಿಸಿ ಸಂರಕ್ಷಿಸತಕ್ಕದ್ದು.

5) ಸಂಬಂಧಪಟ್ಟ ಪ್ರಾಧಿಕಾರದ/ಮಂಡಳಿ/ಇಲಾಖೆಯ ಮೇಲ್ವಿಚಾರಣೆಯ ಅಡಿಯಲ್ಲಿ, ಮೇಲೆ ಹೇಳಲಾದ ಎಲ್ಲಾ ಮೂಲ ಸೌಕರ್ಯಗಳನ್ನು ಒಳಗೊಂಡ ಎಲ್ಲಾ ಅಭಿವೃದ್ಧಿ ಕಾಮಗಾರಿಗಳು ಪೂರ್ಣಗೊಂಡಿರುವುದನ್ನು ಖಚಿತಪಡಿಸಿಕೊಳ್ಳಲು ಮತ್ತು ಎಲ್ಲಾ ಅಭಿವೃದ್ಧಿ ಕಾಮಗಾರಿಗಳನ್ನು ಪೂರ್ಣಗೊಳಿಸಿದ್ದಕ್ಕಾಗಿ ಸಂಬಂಧಪಟ್ಟ ಪ್ರಾಧಿಕಾರ/ ಮಂಡಳಿ/ ಇಲಾಖೆಯಿಂದ ಕಾರ್ಯಪೂರ್ತಿ ಪ್ರಮಾಣ ಪತ್ರವನ್ನು ಪಡೆದು, ಸ್ಥಳೀಯ ಸಂಸ್ಥೆಗೆ ಉದ್ಯಾನವನ & ರಸ್ತೆಗಳನ್ನು ಹಾಗೂ ನಾಗರೀಕ ಸೌಲಭ್ಯದ ಪ್ರದೇಶವನ್ನು ಈ ಪ್ರಾಧಿಕಾರಕ್ಕೆ ಬಿಟ್ಟುಕೊಟ್ಟ ಬಗ್ಗೆ ದಾಖಲೆಗಳನ್ನು ಸಲ್ಲಿಸತಕ್ಕದ್ದು.

6) ತಾತ್ಕಾಲಿಕ ಅನುಮೋದಿತ ವಸತಿ ವಿನ್ಯಾಸ ನಕ್ಷೆಯ ರೀತ್ಯ ಅನುಮೋದನೆ ನೀಡಿದ 02 ವರ್ಷಗಳೊಳಗಾಗಿ ಸಂಪೂರ್ಣವಾಗಿ ಉದ್ಯಾನವನ, ನಾಗರೀಕ ಸೌಲಭ್ಯಕ್ಕೆ ಮೀಸಲಿಟ್ಟ ಜಾಗ, ರಸ್ತೆಗಳು, ಒಳಚರಂಡಿ ವ್ಯವಸ್ಥೆ, ನೀರಿನ ಸೌಕರ್ಯ, ಸೋಕ್‌ಪಿಟ್, ಮಳೆನೀರು ಸಂಗ್ರಹ ಘಟಕ (Rain water Harvesting), Sewage Treatment Plant (ಘನತ್ಯಾಜ್ಯ ನೀರು ಸಂಸ್ಕರಣಾ ಘಟಕ), ವಿದ್ಯುತ್ ಸಂಪರ್ಕಗಳನ್ನು ಅಭಿವೃದ್ಧಿಪಡಿಸತಕ್ಕದ್ದು.

7) ತಾತ್ಕಾಲಿಕ ಅನುಮೋದಿತ ವಸತಿ ವಿನ್ಯಾಸದ ಗಡಿ ನಿರ್ಧಾರ ಮತ್ತು ಅಭಿವೃದ್ಧಿಪಡಿಸುವ ಉದ್ದೇಶಕ್ಕಾಗಿ ನಕ್ಷೆಯನ್ನು ಬಿಡುಗಡೆ ಮಾಡಲಾಗಿದ್ದು, ವಸತಿ ವಿನ್ಯಾಸದಲ್ಲಿನ ನಿವೇಶನಗಳನ್ನು ಪರಭಾರೆ ಮಾಡುವುದಾಗಲೀ ಮತ್ತು ಖಾತೆ ತೆರೆಯುವುದಾಗಲೀ ಮಾಡತಕ್ಕದ್ದಲ್ಲ. ತಾತ್ಕಾಲಿಕ ಅನುಮೋದಿತ ವಸತಿ ವಿನ್ಯಾಸದಲ್ಲಿನ ನಿವೇಶನಗಳಲ್ಲಿ ಕಟ್ಟಡ ನಿರ್ಮಾಣ ಮಾಡಲು ಪ್ರಾರಂಭಿಕ ಪ್ರಮಾಣ ಪತ್ರವನ್ನು ಅಥವಾ ಲೈಸೆನ್ಸನ್ನು ಮಂಜೂರು ಮಾಡತಕ್ಕದ್ದಲ್ಲ.

8) ರಿಯಲ್ ಎಸ್ಟೇಟ್ (ನಿಯಂತ್ರಣ ಮತ್ತು ಅಭಿವೃದ್ಧಿ) ಅಧಿನಿಯಮ-2016 ರ ಕಲಂ (3) ಮತ್ತು (4) ರ ರೀತ್ಯ ರಿಯಲ್ ಎಸ್ಟೇಟ್ ನಿಯಂತ್ರಣ ಪ್ರಾಧಿಕಾರ (RERA) ದಲ್ಲಿ ವಸತಿ ಯೋಜನೆಯ ಪೂರ್ವಭಾವಿ ನೋಂದಣಿಯನ್ನು ಕಡ್ಡಾಯವಾಗಿ ಮಾಡತಕ್ಕದ್ದು.

9) ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣಾ ಮಂಡಳಿಯಿಂದ water (Prevention and Control of Pollution) Act 1974 ರ ಕಲಂ 25 ರ ರೀತ್ಯ ಸೂಕ್ತ ಪ್ರಮಾಣದ Sewage Treatment Plant (ತ್ಯಾಜ್ಯನೀರು ಸಂಸ್ಕರಣಾ ಘಟಕ) ಸ್ಥಾಪಿಸಲು consent for Establishment ಪೂರ್ವಾನುಮತಿ ಪಡೆಯದೇ ಪ್ರಸ್ತಿತ ನಿವೇಶನ / ಜಾಗದಲ್ಲಿ ನೆಲ ಅಗಿಯುವಿಕೆ ಒಳಗೊಂಡಂತೆ ಯಾವುದೇ ರೀತಿಯ ಕಟ್ಟಡ ನಿರ್ಮಾಣ ಅಥವಾ ವಸತಿ ವಿನ್ಯಾಸ ಅಭಿವೃದ್ಧಿ ಕಾಮಗಾರಿಯನ್ನು ಕೈಗೊಳ್ಳತಕ್ಕದ್ದಲ್ಲ. ಉದ್ದೇಶಿತ ಕಟ್ಟಡ / ನೆಲ ಅಭಿವೃದ್ಧಿ ಕಾಮಗಾರಿಗಳನ್ನು ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ವತಿಯಿಂದ Consent for Establishment ಅನುಮತಿ ಪಡೆಯತಕ್ಕದ್ದು.

10) ಪ್ರಸ್ತಿತ ಜಮೀನುಗಳಲ್ಲಿ ಉಪಖನಿಜಗಳಾದ ಮುರ್ರಂ ಮತ್ತು ಕಟ್ಟಡ ಕಲ್ಲುಗಳ ಕಾನೂನು ಬದ್ಧ ವಿಲೇವಾರಿಗೆ ಲಭ್ಯತೆ ಕಂಡುಬಂದಲ್ಲಿ ಕರ್ನಾಟಕ ಉಪಖನಿಜ ರಿಯಾಯಿತಿ ನಿಯಮಾವಳಿ 1944 ರ ತಿದ್ದುಪಡಿ 2023 ನಿಯಮ 3-ಎ ಅನ್ವಯ ಗಣಿ ಮತ್ತು ಭೂವಿಜ್ಞಾನ ಇಲಾಖೆಯ ಪೂರ್ವಾನುಮತಿಯನ್ನು ಕಡ್ಡಾಯವಾಗಿ ಪಡೆಯತಕ್ಕದ್ದು.

11) ತಾತ್ಕಾಲಿಕ ಅನುಮೋದಿತ ವಸತಿ ವಿನ್ಯಾಸದಲ್ಲಿನ ನಿವೇಶನದಾರರಿಗೆ ನೀರು ಸರಬರಾಜು, STP/ಸೆಪ್ಟಿಕ್ ಟ್ಯಾಂಕ್ ಮುಂತಾದ ಮೂಲಭೂತ ಸೌಕರ್ಯಗಳನ್ನು ವಸತಿ ವಿನ್ಯಾಸದ ಮಾಲೀಕರು ಒದಗಿಸತಕ್ಕದ್ದು.

12) ಪ್ರಸ್ತಿತ ಜಮೀನುಗಳಲ್ಲಿ ಸರ್ಕಾರಿ ಖರಾಬು ಜಾಗವನ್ನು ಯಥಾವತ್ತಾಗಿ ಕಾಯ್ದಿರಿಸತಕ್ಕದ್ದು ಹಾಗೂ ಈ ಜಾಗವನ್ನು ಒತ್ತುವರಿ ಮಾಡುವುದು ಅಥವಾ ಇತರೆ ಯಾವುದೇ ಉದ್ದೇಶಕ್ಕೆ ಬಳಸತಕ್ಕದ್ದಲ್ಲ.

13) ಅರ್ಜಿದಾರರು ಉದ್ದೇಶಿಸಿರುವ ಜಮೀನುಗಳಲ್ಲಿ ಸರ್ಕಾರದ ಅಥವಾ ಅನ್ಯಖಾಸಗಿ ಜಮೀನುಗಳೇನಾದರೂ ಸೇರಿಕೊಂಡಿರುವುದು ತಿಳಿದು ಬಂದಲ್ಲಿ ಅಂತಹ ಸಂದರ್ಭದಲ್ಲಿ ಬೆಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳು ತಾತ್ಕಾಲಿಕ ಅನುಮೋದಿತ ವಸತಿ ವಿನ್ಯಾಸ ನಕ್ಷೆಯನ್ನು ಮಾರ್ಪಾಡು ಮಾಡಲು ಅಥವಾ ಹಿಂತೆಗೆದುಕೊಳ್ಳಲು ಅಧಿಕಾರವುಳ್ಳವರಾಗಿರುತ್ತಾರೆ.

ನಂ. 333/1, ಮೊದಲನೇ ಮಹಡಿ, ವಿ.ಜಿ. ಕಾಂಪ್ಲೆಕ್ಸ್, ಶಾಂತಿನಗರ, ಸೂಲಿಬೆಲೆ ರಸ್ತೆ, ದೇವನಹಳ್ಳಿ ಟೌನ್, ಬೆಂಗಳೂರು ಗ್ರಾಮಾಂತರ ಜಿಲ್ಲೆ–562110

ದೂ. : 080–29566001, 080–27682035 ಇಮೇಲ್ : biaapa.devanahalli@gmail.com ವೆಬ್‌ಸೈಟ್ : www.biaapa.tpa.gov.in


14) ತಾತ್ಕಾಲಿಕ ಅನುಮೋದಿತ ವಸತಿ ವಿನ್ಯಾಸ ನಕ್ಷೆ ಅನುಮೋದನೆಯನ್ನು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ 17 ರಡಿಯಲ್ಲಿ ನೀಡುತ್ತಿರುವುದರಿಂದ ಇದನ್ನು ಜಮೀನಿನ ಮೇಲಿರುವ ಹಕ್ಕನ್ನು ಅಥವಾ ಮಾಲೀಕತ್ವವನ್ನು ನಿರೂಪಿಸಲು ಉಪಯೋಗಿಸತಕ್ಕದ್ದಲ್ಲ.

15) ತಾತ್ಕಾಲಿಕ ಅನುಮೋದಿತ ವಸತಿ ವಿನ್ಯಾಸದಲ್ಲಿರುವ ಯಾವುದೇ ನಿವೇಶನಗಳನ್ನು ಉಪವಿಭಜನೆ ಮಾಡಿ ಮಾರಾಟ ಮಾಡತಕ್ಕದ್ದಲ್ಲ, ಒಂದು ವೇಳೆ ಯಾವುದೇ ಬದಲಾವಣೆಯ ಅವಶ್ಯಕತೆ ಇದ್ದಲ್ಲಿ ಪ್ರಾಧಿಕಾರದಿಂದ ಅನುಮತಿ ಪಡೆಯತಕ್ಕದ್ದು. ಈ ಪ್ರಾಧಿಕಾರದ ಪೂರ್ವಾನುಮತಿ ಇಲ್ಲದೆ ಯಾವುದೇ ಬದಲಾವಣೆಯನ್ನು ಮಾಡಬಾರದು.

16) ಬೆಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರವು ಮುಂದೆ ಸೂಚಿಸಬಹುದಾದ ಎಲ್ಲಾ ತಾಂತ್ರಿಕ ವಿಷಯಗಳಿಗೆ ಹಾಗೂ ಶುಲ್ಕಗಳನ್ನು ತುಂಬುವುದರ ನಿರ್ಣಯಕ್ಕೆ ಅರ್ಜಿದಾರರು ಬದ್ಧರಾಗಿರುವುದು.

17) ತಾತ್ಕಾಲಿಕ ಅನುಮೋದಿತ ವಸತಿ ವಿನ್ಯಾಸದಲ್ಲಿನ ರಸ್ತೆ, ರಸ್ತೆಬದಿ ಚರಂಡಿ, ಕಲ್‌ವರ್ಟ್‌ಗಳು, ಪಾದಚಾರಿ ಮಾರ್ಗ ಇತ್ಯಾದಿ ಸಿವಿಲ್ ಕಾಮಗಾರಿಗಳನ್ನು ಸಂಬಂಧಿತ ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ/ನಗರ ಸ್ಥಳೀಯ ಸಂಸ್ಥೆಯ ಉಸ್ತುವಾರಿಯಲ್ಲಿ ಕಾರ್ಯಗತಗೊಳಿಸಿ, ಧೃಢೀಕರಣ ಪತ್ರ ಸಲ್ಲಿಸತಕ್ಕದ್ದು.

18) ತಾತ್ಕಾಲಿಕ ಅನುಮೋದಿತ ವಸತಿ ವಿನ್ಯಾಸದಲ್ಲಿನ ನೀರು ಸರಬರಾಜು ಮತ್ತು ಒಳಚರಂಡಿ ವ್ಯವಸ್ಥೆ ಕಾಮಗಾರಿಗಳನ್ನು ಸಂಬಂಧಿತ ಗ್ರಾಮೀಣ ನೀರು ಸರಬರಾಜು ಇಲಾಖೆ ಉಸ್ತುವಾರಿಯಲ್ಲಿ ಕಾರ್ಯಗತಗೊಳಿಸಿ ಧೃಢೀಕರಣ ಪತ್ರ ಸಲ್ಲಿಸತಕ್ಕದ್ದು.

19) ತಾತ್ಕಾಲಿಕ ಅನುಮೋದಿತ ವಸತಿ ವಿನ್ಯಾಸದಲ್ಲಿನ ವಿದ್ಯುದ್ಧೀಕರಣೆ ಕಾಮಗಾರಿಗಳನ್ನು ಸಂಬಂಧಿತ ಬೆಸ್ಕಾಂ ಮಂಡಳಿ ಉಸ್ತುವಾರಿಯಲ್ಲಿ ಕಾರ್ಯಗತಗೊಳಿಸಿ ಧೃಢೀಕರಣ ಪತ್ರ ಸಲ್ಲಿಸತಕ್ಕದ್ದು.

20) ಪ್ರಸ್ತಾಪಿತ ತಾತ್ಕಾಲಿಕ ಅನುಮೋದಿತ ವಸತಿ ವಿನ್ಯಾಸದಲ್ಲಿ ಘನ ತ್ಯಾಜ್ಯಗಳನ್ನು ಹಸಿತ್ಯಾಜ್ಯ, ಒಣತ್ಯಾಜ್ಯ, ಪ್ಲಾಸ್ಟಿಕ್ ಮತ್ತು ಇತ್ಯಾದಿ ವಿಂಗಡಿಸಿ Compost ಮಾಡಲು ಸೂಕ್ತ ಸ್ಥಳವನ್ನು ಕಾಯ್ದಿರಿಸತಕ್ಕದ್ದು.

21) ಅಭಿವೃದ್ಧಿದಾರರು ಕೊಳಚೆ ನೀರನ್ನು ಬಯಲು ಜಾಗ/ಖಾಲಿ ಜಾಗಗಳಿಗೆ ಬಿಡದೇ ಸಂಸ್ಕರಿಸಿ ಕುಡಿಯುವ ನೀರಿನ ಹೊರತಾಗಿ ಅನ್ಯ ಉದ್ದೇಶಗಳಿಗೆ ಬಳಕೆ ಮಾಡತಕ್ಕದ್ದು.

22) ಅಭಿವೃದ್ಧಿದಾರರು ಉದ್ಯಾನವನಕ್ಕಾಗಿ ಕಾಯ್ದಿರಿಸಿರುವ ಪ್ರದೇಶದಲ್ಲಿ ವಿವಿಧ ಜಾತಿಯ ಗಿಡಮರಗಳನ್ನು ಬೆಳಸಿ ಅಭಿವೃದ್ಧಿಪಡಿಸುವುದು ಹಾಗೂ ಸದರಿ ಉದ್ದೇಶಕ್ಕಾಗಿ ಕಾಯ್ದಿರಿಸಿ ಉಪಯೋಗಿಸತಕ್ಕದ್ದು ಬೇರೆ ಯಾವುದೇ ಉದ್ದೇಶಗಳಿಗೆ ಬದಲಾಯಿಸಬಾರದು. ಈ ಪ್ರದೇಶದಲ್ಲಿ ಹಾಲಿ ಇರುವ ಗಿಡಮರಗಳನ್ನು ಸಾಧ್ಯವಾದಷ್ಟು ಮಟ್ಟಿಗೆ ಉಳಿಸಿಕೊಳ್ಳತಕ್ಕದ್ದು ಮತ್ತು ರಸ್ತೆಗಳ ಎರಡು ಕಡೆ ಗಿಡ/ಮರಗಳನ್ನು ಬೆಳೆಸುವುದು.

23) ತಾತ್ಕಾಲಿಕ ಅನುಮೋದಿತ ವಸತಿ ವಿನ್ಯಾಸದ ಪ್ರದೇಶಗಳಲ್ಲಿ ಮಳೆ ನೀರು ಸಂಗ್ರಹಣೆಯನ್ನು ಕಡ್ಡಾಯವಾಗಿ ಅಳವಡಿಸುವುದು ಮತ್ತು ವಿನ್ಯಾಸದಲ್ಲಿ ಅಂತರ್ಜಲ ವೃದ್ಧಿಗೆ ಅಗತ್ಯ ಕ್ರಮಗಳನ್ನು ಕೈಗೊಳ್ಳುವುದು.

24) ತಾತ್ಕಾಲಿಕ ಅನುಮೋದಿತ ವಿನ್ಯಾಸದಲ್ಲಿನ ರಸ್ತೆಗಳಿಂದ ಅಕ್ಕ–ಪಕ್ಕದ ಜಮೀನುಗಳಿಗೆ ಸಂಪರ್ಕವನ್ನು ಯಾವುದೇ ಕಾರಣಕ್ಕೂ ನಿರ್ಬಂಧಿಸತಕ್ಕದ್ದಲ್ಲ.

25) ಸದರಿ ಜಮೀನುಗಳಿಗೆ ಸಂಬಂಧಿಸಿದಂತೆ ಯಾವುದೇ ಸಿವಿಲ್ ವ್ಯಾಜ್ಯಗಳಿಗೆ ಈ ಪ್ರಾಧಿಕಾರವು ಜವಾಬ್ದಾರಿಯಾಗಿರುವುದಿಲ್ಲ.

26) ತಾತ್ಕಾಲಿಕ ವಸತಿ ವಿನ್ಯಾಸ ನಕ್ಷೆ ಅನುಮೋದನೆ ಕೋರಿಕೆ ಸಂಬಂಧ ಸಲ್ಲಿಸಲಾಗಿರುವ ದಾಖಲೆ ಅಥವಾ ಬೇರೆ ಯಾವುದೇ ಮಾಹಿತಿಗಳು ತಪ್ಪಾಗಿದ್ದಲ್ಲಿ ವಸತಿ ವಿನ್ಯಾಸ ನಕ್ಷೆಗೆ ನೀಡಿರುವ ತಾತ್ಕಾಲಿಕ ಅನುಮೋದನೆ ತಂತಾನೇ ಸ್ವಯಂಚಾಲಿತವಾಗಿ ರದ್ದಾಗುತ್ತದೆ.

27) ಮೇಲಿನಂತೆ ನೀಡಿರುವ ಅನುಮತಿಗೆ ವ್ಯತಿರಿಕ್ತವಾಗಿ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಂಡಲ್ಲಿ ನಿಯಮಾನುಸಾರ ಸೂಕ್ತ ಕ್ರಮ ಜರುಗಿಸಲಾಗುವುದು.

28) ಸರ್ಕಾರದ ಸುತ್ತೋಲೆ ಸಂಖ್ಯೆ: ನಅಇ 209 ಬಿಎಂಆರ್ 2016, ದಿನಾಂಕ: 31/03/2017 ರ ರೀತ್ಯ ಪತ್ರಿಕೆ, ಮಾಧ್ಯಮ, ಜಾಹಿರಾತು ಪ್ರಕಟಣೆಗಳಲ್ಲಿ ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರದ ಹೆಸರನ್ನು ದುರ್ಬಳಕೆ ಮಾಡಿಕೊಳ್ಳುವಂತಿಲ್ಲ. ತಪ್ಪು ಮಾಹಿತಿ ಪ್ರಕಟಿಸದೇ ಅನುಮೋದನೆ ಮಾಡಿಕೊಂಡಿರುವ ಯೋಜನಾ ಪ್ರಾಧಿಕಾರದ ಹೆಸರನ್ನು ಮಾತ್ರ ನಮೂದಿಸತಕ್ಕದ್ದು.

29) ನೈಸರ್ಗಿಕವಾಗಿ ಹರಿಯುವ ನದಿ/ಹಳ್ಳ/ಕೆರೆ/ನಾಲಾ ಮುಂತಾದವುಗಳಿಗೆ ವಿನ್ಯಾಸದ ಮಲೀನ ನೀರನ್ನು ಬಿಡಬಾರದು. ನಾಲಾ ಪ್ರದೇಶಗಳಲ್ಲಿ ರಸ್ತೆ ಪರಿಚಲನೆಯನ್ನು ಮುಂದುವರಿಸುವಾಗ ಸಂಬಂಧಪಟ್ಟ ಸಕ್ಷಮ ಪ್ರಾಧಿಕಾರದಿಂದ ಪೂರ್ವಾನುಮತಿ ಪಡೆದು ಕಲ್ವರ್ಟ್ ಕಟ್ಟತಕ್ಕದ್ದು, ಹಾಗೂ ನೀರಿನ ಹರಿವೆಗಾಗಿ ಯಾವುದೇ ಅಡಚಣೆ ಮಾಡತಕ್ಕದ್ದಲ್ಲ, ಹಾಗೂ ಸೂಕ್ತ ಡ್ರೈನೇಜ್ ನಿರ್ಮಿಸಿ ಸಂರಕ್ಷಿಸತಕ್ಕದ್ದು, ಹಾಗೂ ಯಾವುದೇ ಒತ್ತುವರಿ ಮಾಡತಕ್ಕದ್ದಲ್ಲ. ಸರ್ಕಾರದ ಅಧಿಸೂಚನೆ ಸಂ. ಯುಡಿಡಿ15ಟಿಟಿಪಿ2015, ದಿನಾಂಕ: 21/04/2020 ರ ರೀತ್ಯ ಜಲಪ್ರದೇಶಗಳ ಬಫರ್ ಜಾಗದಲ್ಲಿ water pumping stations, Walking tracks, Play fields without any building constructions, cycling tracks & Parks ಗಳನ್ನು ಮಾತ್ರ ಅಭಿವೃದ್ಧಿಪಡಿಸತಕ್ಕದ್ದು.

30) ಮೇಲ್ಕಂಡ ಯಾವುದೇ ಷರತ್ತುಗಳನ್ನು ಹಾಗೂ ಇತರೆ ಯಾವುದೇ ಪ್ರಾಧಿಕಾರವು ವಿಧಿಸಿರುವ ಷರತ್ತುಗಳನ್ನು ಉಲ್ಲಂಘಿಸಿದಲ್ಲಿ ಪ್ರಾಧಿಕಾರವು ನೀಡಿರುವ ಮಂಜೂರಾತಿಯು ಕೂಡಲೇ ರದ್ದಾಗುವುದು.

ಅರ್ಜಿದಾರರು ತಾತ್ಕಾಲಿಕ ಅನುಮೋದಿತ ವಸತಿ ವಿನ್ಯಾಸದಲ್ಲಿನ ಕಾಮಗಾರಿಗಳನ್ನು ಒಟ್ಟಾರೆಯಾಗಿ ಅಭಿವೃದ್ಧಿಪಡಿಸಿದ ನಂತರ, ತಾತ್ಕಾಲಿಕ ಅನುಮೋದಿತ ವಸತಿ ವಿನ್ಯಾಸ ನಕ್ಷೆಗೆ ಅಂತಿಮ ಅನುಮೋದನೆ ಪಡೆಯುವ ಪೂರ್ವದಲ್ಲಿ ವಸತಿ ವಿನ್ಯಾಸದಲ್ಲಿನ ನಾಗರೀಕ ಸೌಲಭ್ಯ ನಿವೇಶನವನ್ನು ಈ ಪ್ರಾಧಿಕಾರಕ್ಕೆ ಹಾಗೂ ಉದ್ಯಾನವನ/ಬಯಲು ಪ್ರದೇಶ ಹಾಗೂ ರಸ್ತೆಗಳನ್ನು ಸಂಬಂಧಿಸಿದ ಸ್ಥಳೀಯ ಸಂಸ್ಥೆಗೆ ನೋಂದಾಯಿತ ಪರಿತ್ಯಾಜನಾ ಪತ್ರಗಳ ಮುಖಾಂತರ ಪ್ರತ್ಯೇಕವಾಗಿ ಪುಕ್ಕಟೆಯಾಗಿ ಹಸ್ತಾಂತರಿಸಿ, ಅಭಿವೃದ್ಧಿ ಕಾಮಗಾರಿಗಳನ್ನು ಪೂರ್ಣಗೊಳಿಸಿರುವ ಬಗ್ಗೆ ವಿವಿಧ ಇಲಾಖೆಗಳಿಂದ ಅಂದರೆ ನೀರು ಸರಬರಾಜು, ಒಳಚರಂಡಿ, Sewage Treatment Plant (ಘನತ್ಯಾಜ್ಯ ನೀರು ಸಂಸ್ಕರಣಾ ಘಟಕ)/ ಸೋಕ್‌ಪಿಟ್ ಅಭಿವೃದ್ಧಿಪಡಿಸಿರುವ ಬಗ್ಗೆ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯಿಂದ, ರಸ್ತೆ ಕಾಮಗಾರಿಗಳು, ಮಳೆನೀರು ಸಂಗ್ರಹಣೆ ಘಟಕ (Rain water Harvesting), ಮಳೆನೀರು ಚರಂಡಿ ಕಾಮಗಾರಿಗಳಿಗೆ ಸಂಬಂಧಿಸಿದಂತೆ ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆಯಿಂದ, ವಿದ್ಯುತ್ ಸರಬರಾಜು ಮಾಡಿರುವ ಬಗ್ಗೆ ಬೆಸ್ಕಾಂನಿಂದ, ಉದ್ಯಾನವನ/ ಬಯಲುಜಾಗ ಅಭಿವೃದ್ಧಿಪಡಿಸಿರುವ ಬಗ್ಗೆ ತೋಟಗಾರಿಕೆ ಇಲಾಖೆಯಿಂದ ಹಾಗೂ Sewage Treatment Plant (ತ್ಯಾಜ್ಯನೀರು ಸಂಸ್ಕರಣಾ ಘಟಕ) ಸ್ಥಾಪಿಸಿರುವ ಬಗ್ಗೆ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣಾ ಮಂಡಳಿಯಿಂದ ಪಡೆದ Consent for Establishment and Operation ಪತ್ರ ಮತ್ತು ಎಲ್ಲಾ ಕಾಮಗಾರಿಗಳನ್ನು ಪೂರ್ಣಗೊಳಿಸಿರುವ ಬಗ್ಗೆ ಸ್ಥಳೀಯ ಸಂಸ್ಥೆಯಿಂದ ಪ್ರಮಾಣ ಪತ್ರ ಹಾಗೂ ಎಲ್ಲಾ ಕಾಮಗಾರಿಗಳನ್ನು ಪೂರ್ಣಗೊಳಿಸಿರುವ ಬಗ್ಗೆ ಸ್ಥಳೀಯ ಸಂಸ್ಥೆಯಿಂದ ಪ್ರಮಾಣ ಪತ್ರ ಹಾಗೂ ವಿನ್ಯಾಸದಲ್ಲಿ ಮೂಲಭೂತ ಸೌಲಭ್ಯಗಳು ಮತ್ತು ಸಾರ್ವಜನಿಕ ಪ್ರದೇಶಗಳ ನಿರ್ವಹಣೆ ಬಗ್ಗೆ ಸ್ಥಳೀಯ ಸಂಸ್ಥೆಯಿಂದ ಕಾಮಗಾರಿ ಮುಕ್ತಾಯ ಪತ್ರವನ್ನು ಪಡೆದು ಸಲ್ಲಿಸಿ, ವಿನ್ಯಾಸ ನಕ್ಷೆಗೆ ಅಂತಿಮ ಅನುಮೋದನೆ ಹಾಗೂ ನಿವೇಶನಗಳ ಬಿಡುಗಡೆಗೆ ಮನವಿ ಸಲ್ಲಿಸತಕ್ಕದ್ದು.

**ಲಗತ್ತು:-**
ಗಡಿ ನಿರ್ಧಾರ ಮತ್ತು ಅಭಿವೃದ್ಧಿ ಕಾರ್ಯ
ಕೈಗೊಳ್ಳಲು ಮಾತ್ರ ನೀಡಲಾಗಿರುವ ತಾತ್ಕಾಲಿಕ
ವಸತಿ ವಿನ್ಯಾಸ ನಕ್ಷೆ.

**ಸಹಿ/-**
**ನಗರ ಮತ್ತು ಗ್ರಾಮಾಂತರ ಯೋಜನಾ ಜಂಟಿ ನಿರ್ದೇಶಕರು**
**ಹಾಗೂ ಸದಸ್ಯ ಕಾರ್ಯದರ್ಶಿಗಳು,**
ಬೆಂಗಳೂರು ಅಂತರಾಷ್ಟ್ರೀಯ ವಿಮಾನ
ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರ,
ದೇವನಹಳ್ಳಿ.

**ರವರಿಗೆ,**

ಮೆ॥ ಪಿನಾಕಲ್ ಇನ್ವೆಸ್ಟ್‌ಮೆಂಟ್ಸ್ ರ ಪರವಾಗಿ ಪಾಲುದಾರರಾದ
ಮೆ॥ ಐಎನ್ಆರ್ ಎನರ್ಜಿ ಪ್ರೈವೇಟ್ ಲಿಮಿಟೆಡ್ ರ ಪರವಾಗಿ
ನಿರ್ದೇಶಕರಾದ ಶ್ರೀ ಇರ್ಫಾನ್ ರಜಾಕ್ ಹಾಗೂ ಅಧಿಕೃತ
ಸಹಿದಾರರಾದ ಶ್ರೀ ಪ್ರವೀಣ್ ಕುಮಾರ್.ಎಂ.ಎಸ್,
#19, ಪ್ರೆಸ್ಟೀಜ್ ಫಾಲ್ಕನ್ ಟವರ್, ಬ್ರಂಟನ್ ರಸ್ತೆ,
ಬೆಂಗಳೂರು-560025.

# ಬೆಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರ, ದೇವನಹಳ್ಳಿ

**ನಂ. 333/1, ಮೊದಲನೇ ಮಹಡಿ, ವಿ.ಜೆ. ಕಾಂಪ್ಲೆಕ್ಸ್, ಶಾಂತಿನಗರ, ಸೂಲಿಬೆಲೆ ರಸ್ತೆ, ದೇವನಹಳ್ಳಿ ಟೌನ್, ಬೆಂಗಳೂರು ಗ್ರಾಮಾಂತರ ಜಿಲ್ಲೆ–562110**

**ದೂ.** : 080–29566001, 080–27682035 **ಇಮೇಲ್** : biaapa.devanahalli@gmail.com ವೆಬ್‌ಸೈಟ್ : www.biaapa.tpa.gov.in


ಪ್ರತಿಯನ್ನು:

1. **ಭೂದಾಖಲೆಗಳ ಸಹಾಯಕ ನಿರ್ದೇಶಕರು, ದೇವನಹಳ್ಳಿ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ,** ಇವರಿಗೆ ತಾತ್ಕಾಲಿಕ ಅನುಮೋದಿತ ವಸತಿ ವಿನ್ಯಾಸ ನಕ್ಷೆಯ ಪ್ರತಿಯನ್ನು ಕಳುಹಿಸಿದ್ದು, ದೃಢೀಕೃತ ಸರ್ವೆ ನಕ್ಷೆಯನ್ವಯ ವಸತಿ ವಿನ್ಯಾಸ ನಕ್ಷೆಗೆ ತಾತ್ಕಾಲಿಕ ಅನುಮೋದನೆಗಾಗಿ ಪರಿಗಣಿಸಲಾಗಿದ್ದು, ದೃಢೀಕೃತ ಸರ್ವೆ ನಕ್ಷೆಯಂತೆ ಅನುಗುಣವಾಗಿ ಇಲ್ಲದಿದ್ದಲ್ಲಿ ಅಥವಾ ಯಾವುದೇ ಸರ್ಕಾರಿ ಜಮೀನುಗಳು ಒಳಗೊಂಡಿದ್ದಲ್ಲಿ ಈ ಪ್ರಾಧಿಕಾರಕ್ಕೆ ಮಾಹಿತಿ ನೀಡಲು ಹಾಗೂ ತಾತ್ಕಾಲಿಕ ಅನುಮೋದನೆ ನೀಡಲಾದ ವಸತಿ ವಿನ್ಯಾಸ ನಕ್ಷೆಯಂತೆ ಯಾವುದೇ ಕೆರೆ / ಖರಾಬು ಒತ್ತುವರಿ ಆಗಿಲ್ಲದೇ ಇರುವ ಬಗ್ಗೆ ಮಾಹಿತಿ ನೀಡಲು ಕೋರಿದೆ. ತಮ್ಮ ವತಿಯಿಂದ ಯಾವುದೇ ಮಾಹಿತಿ ಸ್ವೀಕೃತಗೊಂಡಿಲ್ಲದ ಪಕ್ಷದಲ್ಲಿ ದಾಖಲೆಯಂತೆ ವಸತಿ ವಿನ್ಯಾಸ ನಕ್ಷೆಯ ಅನುಮೋದನೆಯು ಸರಿಯಾಗಿರುತ್ತದೆ ಎಂದು ತಿಳಿದು ಮುಂದಿನ ಕ್ರಮಕೈಗೊಳ್ಳಲಾಗುವುದೆಂಬ ಅಂಶವನ್ನು ತಮ್ಮ ಗಮನಕ್ಕೆ ತರಲಾಗಿದೆ.
2. **ಉಪನೋಂದಣಾಧಿಕಾರಿಗಳು, ದೇವನಹಳ್ಳಿ ತಾಲ್ಲೂಕು,** ಇವರಿಗೆ ಕಳುಹಿಸುತ್ತಾ, ವಸತಿ ವಿನ್ಯಾಸ ನಕ್ಷೆಗೆ ತಾತ್ಕಾಲಿಕ ಅನುಮೋದನೆ ಮಾತ್ರ ನೀಡಲಾಗಿದ್ದು, ತಾತ್ಕಾಲಿಕ ಅನುಮೋದಿತ ವಸತಿ ವಿನ್ಯಾಸ ನಕ್ಷೆಗೆ ಅಂತಿಮ ಅನುಮೋದನೆ ನೀಡಿ ನಿವೇಶನಗಳನ್ನು ಬಿಡುಗಡೆಗೊಳಿಸುವವರೆಗೂ ತಾತ್ಕಾಲಿಕ ಅನುಮೋದಿತ ವಸತಿ ವಿನ್ಯಾಸದಲ್ಲಿನ ಯಾವುದೇ ನಿವೇಶನಗಳಿಗೆ ನೋಂದಣಿ ಮಾಡಬಾರದೆಂದು ಈ ಮೂಲಕ ಸೂಚಿಸಲಾಗಿದೆ.
3. **ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು, ಜಾಲಿಗೆ ಗ್ರಾಮ ಪಂಚಾಯಿತಿ** ಇವರಿಗೆ ತಾತ್ಕಾಲಿಕ ಅನುಮೋದಿತ ವಸತಿ ವಿನ್ಯಾಸ ನಕ್ಷೆಯ ಪ್ರತಿಯನ್ನು ಕಳುಹಿಸುತ್ತಾ, ವಸತಿ ವಿನ್ಯಾಸ ನಕ್ಷೆಗೆ ತಾತ್ಕಾಲಿಕ ಅನುಮೋದನೆ ಮಾತ್ರ ನೀಡಲಾಗಿದ್ದು, ಪ್ರಶ್ನಿತ ತಾತ್ಕಾಲಿಕ ಅನುಮೋದಿತ ವಸತಿ ವಿನ್ಯಾಸ ನಕ್ಷೆಗೆ ಅಂತಿಮ ಅನುಮೋದನೆ ನೀಡಿ ನಿವೇಶನಗಳನ್ನು ಬಿಡುಗಡೆಗೊಳಿಸುವವರೆಗೂ ತಾತ್ಕಾಲಿಕ ಅನುಮೋದಿತ ವಸತಿ ವಿನ್ಯಾಸದಲ್ಲಿನ ಯಾವುದೇ ನಿವೇಶನಗಳಿಗೆ ಖಾತಾ ನೋಂದಣಿ ಮಾಡಬಾರದೆಂದು ಈ ಮೂಲಕ ಸೂಚಿಸಲಾಗಿದೆ.
4. **ಕಾರ್ಯದರ್ಶಿ, ಕರ್ನಾಟಕ ರಿಯಲ್ ಎಸ್ಟೇಟ್ ನಿಯಂತ್ರಣ ಪ್ರಾಧಿಕಾರ,** ನಂ. 1/14, 2 ನೇ ಮಹಡಿ, ಸಿಲ್ವರ್ ಜ್ಯೂಬಿಲಿ ಬ್ಲಾಕ್, ಯುನಿಟಿ ಬಿಲ್ಡಿಂಗ್, ಸಿ.ಎಸ್.ಐ ಕಾಂಪೌಂಡ್, 3 ನೇ ಕ್ರಾಸ್ ಮಿಷನ್ ರಸ್ತೆ, ಬೆಂಗಳೂರು–560027 ಇವರ ಮಾಹಿತಿಗಾಗಿ ಕಳುಹಿಸಿದೆ.
5. **ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ, ದೇವನಹಳ್ಳಿ ಉಪವಿಭಾಗ** ಇವರಿಗೆ ತಾತ್ಕಾಲಿಕ ಅನುಮೋದಿತ ವಸತಿ ವಿನ್ಯಾಸ ನಕ್ಷೆಯ ಪ್ರತಿಯನ್ನು ಮುಂದಿನ ಕ್ರಮಕ್ಕಾಗಿ ಕಳುಹಿಸಿದೆ.
6. **ಸಹಾಯಕ ಕಾರ್ಯಪಾಲಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪವಿಭಾಗ,** ದೇವನಹಳ್ಳಿ ಇವರಿಗೆ ತಾತ್ಕಾಲಿಕ ಅನುಮೋದಿತ ವಸತಿ ವಿನ್ಯಾಸ ನಕ್ಷೆಯ ಪ್ರತಿಯನ್ನು ಮುಂದಿನ ಕ್ರಮಕ್ಕಾಗಿ ಕಳುಹಿಸಿದೆ.
7. **ಸಹಾಯಕ ಕಾರ್ಯಪಾಲಕ ಅಭಿಯಂತರರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ,** ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗ, ಬೆಂಗಳೂರು ಗ್ರಾಮಾಂತರ ಜಿಲ್ಲೆ, ಜಿಲ್ಲಾಧಿಕಾರಿಗಳ ಕಛೇರಿ ಆವರಣ, ಚಪ್ಪರದಕಲ್ಲು (ಬೀರಸಂದ್ರ) ದೇವನಹಳ್ಳಿ ತಾಲ್ಲೂಕು–562110 ಇವರಿಗೆ ತಾತ್ಕಾಲಿಕ ಅನುಮೋದಿತ ವಸತಿ ವಿನ್ಯಾಸ ನಕ್ಷೆಯ ಪ್ರತಿಯನ್ನು ಮುಂದಿನ ಕ್ರಮಕ್ಕಾಗಿ ಕಳುಹಿಸಿದೆ.
8. **ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು, ಜಿಲ್ಲಾ ಪಂಚಾಯತ್, ದೇವನಹಳ್ಳಿ** ಇವರಿಗೆ ತಾತ್ಕಾಲಿಕ ಅನುಮೋದಿತ ವಸತಿ ವಿನ್ಯಾಸ ನಕ್ಷೆಯ ಪ್ರತಿಯನ್ನು ಮುಂದಿನ ಕ್ರಮಕ್ಕಾಗಿ ಕಳುಹಿಸಿದೆ.
9. **ಹಿರಿಯ ಪರಿಸರಾಧಿಕಾರಿಗಳು, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣಾ ಮಂಡಳಿ, 'ಪರಿಸರ ಭವನ',** 1 ರಿಂದ 5 ನೇ ಮಹಡಿಗಳು, ನಂ 49, ಚರ್ಚ್ ಸ್ಟ್ರೀಟ್, ಬೆಂಗಳೂರು–560001 ಇವರಿಗೆ ತಾತ್ಕಾಲಿಕ ಅನುಮೋದನೆ ನಕ್ಷೆಯ ಪ್ರತಿಯನ್ನು ಮುಂದಿನ ಕ್ರಮಕ್ಕಾಗಿ ಕಳುಹಿಸಿದೆ.
10. **ಕಛೇರಿ ಪ್ರತಿ.**

15/07/2025

**ನಗರ ಮತ್ತು ಗ್ರಾಮಾಂತರ ಯೋಜನಾ ಜಂಟಿ ನಿರ್ದೇಶಕರು**
**ಹಾಗೂ ಸದಸ್ಯ ಕಾರ್ಯದರ್ಶಿಗಳು,**
ಬೆಂಗಳೂರು ಅಂತರಾಷ್ಟ್ರೀಯ ವಿಮಾನ
ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರ,
ದೇವನಹಳ್ಳಿ.